## ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 101/ 2015**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀಮತಿ ಕಾಶಿಬಾಯಿ | ಫ್ರಾಸಾಃ **46** |
| ತಂದೆಯ/ಗಂಡನ ಹೆಸರುಃ | ತುಳಸಿರಾಮ | ಚಾಸಾಃ **73** |
| ವಯಸ್ಸುಃ | 55 ವರ್ಷ | ದಿಃ **27-07-2026** |
| ಉದ್ಯೋಗಃ | ಮನೆಕೆಲಸ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಬೊರಬಂಡ ಗ್ರಾಮ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿನಾಂಕ 28-06-2014 ರಂದು ನಾನು ಹಾಗೂ ಗ್ರಾಮದ ಇತರರು ಆರೋಪಿಯ ಗೂಡ್ಸ ವಾಹನದಲ್ಲಿ ಬೆಟದಳ್ಳಿ ಗ್ರಾಮಕ್ಕೆ ಹೋಗಿದ್ದೆವು ಎಂದರೆ ಸರಿಯಲ್ಲ. ಸದರಿ ಗ್ರಾಮದಲ್ಲಿ ಅಂತ್ಯಸಂಸ್ಕಾರ ಮುಗಿಸಿಕೊಂಡು ಮರಳಿ ನಮ್ಮೂರಿಗೆ ಬರುತ್ತಿದ್ದಾಗ ಮ 12.15 ಗಂಟೆಗೆ ಚೆನ್ನಾಕಾರ ಗ್ರಾಮದ ಸಣ್ಣಮುಕ್ಕಪ್ಪ ಇವರ ಹೊಲದ ಹತ್ತಿರ ಇಳಿಜಾರು ಹಾಗೂ ತಿರುವಿನಲ್ಲಿ ಆರೋಪಿ ವಾಹನವನ್ನು ಅತೀವೇಗ ಹಾಗೂ ಅಲಕ್ಷ್ಯತನದಿಂದ ಚಾಲನೆ ಮಾಡಿ ರಸ್ತೆಯ ಬಲಬದಿಯಲ್ಲಿ ಪಲ್ಟಿ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಅಪಘಾತದಲ್ಲಿ ನನ್ನ ಎದೆಯ ಎಡಭಾಗಕ್ಕೆ, ಮೂಗಿಗೆ ಹಾಗೂ ಮೈ ಕೈಗೆ ಭಾರಿ ಸ್ವರೂಪದ ಗಾಯಗಳು ಆಗಿದ್ದವು ಎಂದರೆ ಸರಿಯಲ್ಲ. ಸದರಿ ವಾಹನದಲ್ಲಿದ್ದ ಇತರ 67 ಜನರಿಗೂ ಮತ್ತು ಚಾಲಕನಾಗಿದ್ದ ಆರೋಪಿಗೂ ಸಹ ಗಾಯಗಳಾಗಿದ್ದವು ಎಂದರೆ ನನಗೆ ಗೊತ್ತಿಲ್ಲ. ನಂತರ ನಮ್ಮನ್ನು ಗುರುಮಿಠಕಲ್ ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು ಎಂದರೆ ಸರಿಯಲ್ಲ.

ಸೋಮಲಾ ಪವಾರ ಎಂಬಾತ  ಅಪಘಾತದ ಪರಿಣಾಮವಾಗಿ ಆಸ್ಪತ್ರೆಯಲ್ಲಿ ಮರಣ ಹೊಂದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತ ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ಈ ಮೇಲಿನಂತರ ಪೋಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ 113 ಎಂದು ಗುರುತಿಸಲಾಯಿತು. ಈ ಮೇಲಿನ ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಎಂ ಎಂ ಇ ವಕೀಲರಿಂದ ಃ</u>

ಪಾಟೀ ಸವಾಲು ಇಲ್ಲಾ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.

# ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 1264/ 2024**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ದೇವಪ್ಪ | ಫ್ರಾಸಾಃ **02** |
| ತಂದೆಯ ಹೆಸರುಃ | ತಿಪ್ಪಣ್ಣ | ಚಾಸಾಃ **05** |
| ವಯಸ್ಸುಃ | **45** ವರ್ಷ | ದಿಃ **12-11-2024** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಗುರುಮಠಕಲ್ | |

ಸಾಕ್ಷಿಗೆ ತೆಲಗು ಭಾಷೆ ಬರುತ್ತದೆ ಕನ್ನಡ ಭಾಷೆ ಬರುವುದಿಲ್ಲ ಎಂದು ಹೇಳಿದ ಮೇರೆಗೆ ಶ್ರೀ ಎನ್.ಬಿ.ಎ. ವಕೀಲರನ್ನು ಭಾಷಾಂತರಕಾರರನ್ನಾಗಿ ನೇಮಿಸಲಾಯಿತು.

<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ</u>

ಚಾಸಾಃ 1 ನನ್ನ ತಮ್ಮ ಹಾಗೂ ಚಾಸಾಃ 6 ಆತನ ಹೆಂಡತಿ ಆಗಿರುತ್ತಾರೆ. ನನಗೆ ಚಾಸಾಃ 4 ಹಾಗೂ ಆರೋಪಿತರ ಪರಿಚಯವಿದೆ. ನನಗೆ ಈ ಪ್ರಕರಣ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರಿಗೆ ಹೇಳಿಕೆ ನೀಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ</u>

ದಿಃ 21.04.2024 ರಂದು ರಾಃ 8-00 ಗಂಟೆಗೆ ಚಾಸಾಃ 1 ರವರು ಗುರುಮಠಕಲ್ ಪಟ್ಟಣದ ಹರಿಜನ ವಾಡಾದ ಅಂಗನವಾಡಿ ಮುಂದಿನ ರಸ್ತೆಯ ಮೇಲೆ ನಡೆದುಕೊಂಡು ಹೋಗುತ್ತಿರುವಾಗ ಆರೋಪಿತರು ಬಂದು ಅವರನ್ನು ತಡೆದು ನಿಲ್ಲಿಸಿ ಅವಾಚ್ಯ ಶಬ್ದಗಳಿಂದ ಬೈದಿದ್ದರು ಎಂದರೆ ಸರಿಯಲ್ಲ. 1 ನೇ ಆರೋಪಿ ಕಲ್ಲಿನಿಂದ ಅವರ ಎಡಕೆನ್ನೆಯ ಹತ್ತಿರ ಹೊಡೆದಿದ್ದನು ಎಂದರೆ ಸರಿಯಲ್ಲ. ಇಬ್ಬರು ಆರೋಪಿತರು ಚಾಸಾಃ 1 ರವರಿಗೆ ಕೈಯಿಂದ ಹೊಡಿ-ಬಡಿ ಮಾಡಿ ಕಾಲಿನಿಂದ ಒದ್ದಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾಃ 4 ಹಾಗೂ 6 ರವರು ಹೋಗಿ ಜಗಳ ಬಿಡಿಸಿದ್ದೆವು ಎಂದರೆ ಸರಿಯಲ್ಲ. ಆ ನಂತರ 1 ನೇ ಆರೋಪಿ ಚಾಸಾಃ 1 ರವರಿಗೆ ಜೀವ ಬೆದರಿಕೆ ಹಾಕಿ ಹೋಗಿದ್ದರು ಎಂದರೆ ಸರಿಯಲ್ಲ. ಈ ಮೇಲಿನಂತೆ ನಾನು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಯ